Sixth Graduation day in RVCE

ಎಚ್.ಟಿ.ಪರಮಶಿವಯ್ಯ ಸಾರಥ್ಯದಲ್ಲಿ... ಹಾಯ್ ಕೆಂಗೇರಿ ಪತ್ರಿಕೆ 10 ನೇ ವರ್ಷದ ಸಂಭ್ರಮದಲ್ಲಿ ನಿಮ್ಮ ನೆಚ್ಚಿನ ಪತ್ರಿಕೆ...

# ಆರ್‌ವಿ ಕಾಲೇಜಿನಲ್ಲಿ 6ನೇ ಘಟಿಕೋತ್ಸವ




ಸಾಹಿತ್ಯ ತರ್ಕಶಾಸ್ತ್ರ ಹಾಗೂ ಇತಿಹಾಸಗಳು ಸರ್ವತೋಮುಖ ಬೆಳವಣಿಗೆಯಲ್ಲಿ ಬೌದ್ಧಿಕ ಅರಿವು ಪ್ರಮುಖ ಪಾತ್ರ ನಿರ್ವಹಿಸುತ್ತದೆ ಎಂದು ಇಸ್ರೋ ಸಂಸ್ಥೆಯ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತ ಎ.ಎಸ್.ಕಿರಣ್‌ಕುಮಾರ್ ತಿಳಿಸಿದರು.

ಅವರು ಮೈಸೂರ್ ರಸ್ತೆಯ ಆರ್.ವಿ.ತಾಂತ್ರಿಕ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ 6ನೇ ಘಟಿಕೋತ್ಸವ ಹಾಗೂ ಪದವಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು

ನಿಸರ್ಗವು ವಿಜ್ಞಾನ ಹಾಗೂ ತಂತ್ರಜ್ಞಾನದಲ್ಲಿನ ಆವಿಷ್ಕಾರಗಳಿಗೆ ಪ್ರೇರಣೆಯಾಗಿದ್ದು ಆರೋಗ್ಯ, ರಕ್ಷಣಾ ವ್ಯವಸ್ಥೆ, ಶಿಕ್ಷಣ, ಮನರಂಜನೆ, ಸಂವಹನ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿನ ಮಹತ್ವದ ಬದಲಾವಣೆಗೆ ಕಾರಣವಾಗಿವೆ. ಜಾಗತಿಕ ತಾಪಮಾನ ಏರಿಕೆ, ಹಿಮ ಪ್ರವಾಹ, ಸಮುದ್ರ ಮಟ್ಟದ ಏರಿಕೆ, ವಾಯು ಮಾಲಿನ್ಯ, ಸಾಗರದ ಆಮ್ಲೀಕರಣ, ವನ್ಯ ಜೀವಿಗಳ ಪ್ರಬೇಧ, ಅಂತರ್ಜಲ ಮಲಿನತೆ ಮುಂತಾದವುಗಳಿಂದ ಉಂಟಾಗುವ ದುಷ್ಪರಿಣಾಮಗಳ ಮುಂದಾಲೋಚನೆ ಇಲ್ಲದೆ ತಂತ್ರಜ್ಞಾನ ಆವಿಷ್ಕಾರದಿಂದ ಉಂಟಾಗಿದೆ ಎಂದು ಅಭಿಪ್ರಾಯಪಟ್ಟರು.

ಆರ್.ವಿ.ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಸಂಸ್ಥೆಗಳ ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿಯನ್ನು ತಮ್ಮ ವಿದ್ಯಾರ್ಜನೆಯ ಸಮಯದಲ್ಲೇ ಅಳವಡಿಸಿಕೊಂಡು ದೇಶಕ್ಕೆ ಪೂರಕವಾದಂತಹ ಸೇವೆಯನ್ನು ಸಲ್ಲಿಸುವ ಮೂಲಕ ಸಂಸ್ಥೆಯ ಘನತೆ ಗೌರವನ್ನು ಹೆಚ್ಚಿಸ ಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ.ಕೆ.ಎನ್.ಸತ್ಯನಾರಾಯಣ, ಶಿಕ್ಷಕ ವೃಂದ ಹಾಗೂ ಹಲವಾರು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಹಾಗೂ ಹೆಚ್ಚಿನ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಚಿತ್ರ : ಶನಿವಾರ ಆರ್.ವಿ.ತಾಂತ್ರಿಕ ಕಾಲೇಜಿನ 6ನೇ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಆಯೋಜಿಸಲಾಗಿದ್ದ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಸಮಾರಂಭದಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತ ಎ.ಎಸ್.ಕಿರಣ್‌ಕುಮಾರ್ ಭಾಗವಹಿಸಿದ್ದರು. ಆರ್.ವಿ.ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗಶೆಟ್ಟಿ, ಪ್ರಾಂಶುಪಾಲ ಡಾ.ಕೆ.ಎಸ್.ಸತ್ಯನಾರಾಯಣ ಮುಂತಾದವರು ಉಪಸ್ಥಿತರಿದ್ದರು